# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 132 |
| ಸದಸ್ಯರ ಹೆಸರು | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14.02.2023. |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಅಂದಾಜು ಎಷ್ಟು ಮೆಟ್ರಿಕ್ ಟನ್ ಪ್ರಮಾಣದ ಮರಳಿನ ಬೇಡಿಕೆ ಮತ್ತು ಕೊರತೆ ಇದೆ; ರಾಜ್ಯ ಮತ್ತು ಹೊರ ರಾಜ್ಯಗಳಿಂದ ಎಷ್ಟು ಪ್ರಮಾಣದ ಮರಳು ಪೂರೈಕೆ (ಎಂ-ಸ್ಯಾಂಡ್, ನದಿ ಮೂಲ ಇತ್ಯಾದಿ) ಆಗುತ್ತಿದೆ; (ಸಂಪೂರ್ಣ ವಿವರ ನೀಡುವುದು) | • ರಾಜ್ಯದಲ್ಲಿ ನಿರ್ಮಾಣ ಕಾಮಗಾರಿಗಳಿಗೆ ವಾರ್ಷಿಕ ಅಂದಾಜು 45 ದಶಲಕ್ಷ ಮೆಟ್ರಿಕ್ ಟನ್ ಮರಳಿನ ಬೇಡಿಕೆ ಇರುತ್ತದೆ. ರಾಜ್ಯದಲ್ಲಿ, ಪ್ರಸ್ತುತ, ಒಟ್ಟು 692 ಎಂ-ಸ್ಯಾಂಡ್ ಉತ್ಪಾದನಾ ಘಟಕಗಳು ಕಾರ್ಯ ನಿರ್ವಹಿಸುತ್ತಿದ್ದು, ಸದರಿ ಎಂ-ಸ್ಯಾಂಡ್ ಘಟಕ ಗಳಿಂದ ಅಂದಾಜು 30 ದಶಲಕ್ಷ ಮೆಟ್ರಿಕ್ ಟನ್ ಎಂ-ಸ್ಯಾಂಡ್ ಉತ್ಪಾದಿಸಲಾಗುತ್ತಿದೆ.<br>• ನದಿ ಪಾತ್ರದ ಮರಳು ಗುತ್ತಿಗೆ ಪ್ರದೇಶಗಳಲ್ಲಿ ಮತ್ತು ಪಟ್ಟಾ ಜಮೀನಿನ ಮರಳು ಗಣಿಗಾರಿಕೆ ಲೈಸನ್ಸ್ ಪ್ರದೇಶಗಳಲ್ಲಿ ವಾರ್ಷಿಕ ಅಂದಾಜು 3 ರಿಂದ 4 ದಶಲಕ್ಷ ಮೆಟ್ರಿಕ್ ಟನ್ ಮರಳು ಪೂರೈಸ ಲಾಗುತ್ತದೆ. ಹೊರ ರಾಜ್ಯಗಳಿಂದ ಅಂದಾಜು 4 ರಿಂದ 5 ದಶ ಲಕ್ಷ ಮೆಟ್ರಿಕ್ ಟನ್ ನದಿ ಮರಳು ಹಾಗೂ ಎಂ-ಸ್ಯಾಂಡ್ ಪೂರೈಕೆಯಾಗುತ್ತಿರುತ್ತದೆ. ಅಂದಾಜು 6 ರಿಂದ 8 ದಶಲಕ್ಷ ಮೆಟ್ರಿಕ್ ಟನ್ ಮರಳು ಕೊರತೆ ಇರುತ್ತದೆ.<br>• ರಾಜ್ಯದಲ್ಲಿ ಮರಳಿನ ಕೊರತೆಯನ್ನು ನೀಗಿಸಲು ಎಂ-ಸ್ಯಾಂಡ್ ಉತ್ಪಾದನೆಗೆ ಪ್ರೋತ್ಸಾಹ ನೀಡಲಾಗುತ್ತಿದೆ.<br>• ಮುಂದುವರೆದು, ದಿನಾಂಕ 01.12.2021 ರಂದು ಸರ್ಕಾರವು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2021 ನ್ನು ಜಾರಿಗೆ ತಂದಿರುತ್ತದೆ.<br>• ಸದರಿ ನಿಯಮಗಳಲ್ಲಿ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆ ಸೇರಿದಂತೆ ಹೆಚ್ಚುವರಿಯಾಗಿ I, II ಮತ್ತು III ನೇ ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ಹಾಗೂ ಅಣೆಕಟ್ಟು / ಜಲಾಶಯ / ಬ್ಯಾರೇಜ್‌ಗಳು ಮತ್ತು ಸದರಿ ಹಿನ್ನೀರಿನ ಪ್ರದೇಶಗಳಲ್ಲಿ ಹೂಳಿನೊಂದಿಗೆ ದೊರೆತ ಮರಳನ್ನು ತೆಗೆದು ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಪೂರೈಕೆ ಮಾಡಲು ಅವಕಾಶ ಕಲ್ಪಿಸಲಾಗುತ್ತಿದೆ. |

| | | |
|---|---|---|
| | | ಮೇಲ್ಕಂಡಂತೆ, ರಾಜ್ಯದಲ್ಲಿ ಬೇಡಿಕೆಗೆ ತಕ್ಕಂತೆ ಮರಳು ಪೂರೈಸಲು ಕ್ರಮ ವಹಿಸಲಾಗಿರುತ್ತದೆ. |
| ಆ) | ನಿರ್ಮಾಣ ಕಾಮಗಾರಿಗಳಿಗೆ ಗ್ರಾಹಕರಿಗೆ ಕೈಗೆಟಕುವ ದರದಲ್ಲಿ, ನಿಯಮಿತವಾಗಿ, ಪಾರದರ್ಶಕವಾಗಿ ಮರಳು ದೊರಕುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಮರಳಿನ ಅಭಾವ ನೀಗಿಸಲು ಮತ್ತು ಕಟ್ಟಡ, ರಸ್ತೆ ಹಾಗೂ ಇತರೆ ಕಾಮಗಾರಿಗಳಿಗೆ ನಿಗದಿತ ದರದಲ್ಲಿ ಮರಳು ಲಭ್ಯವಾಗುವಂತೆ ಮಾಡಲು ಸರ್ಕಾರವು ದಿನಾಂಕ 05.05.2020 ರಂದು ಹೊಸ ಮರಳು ನೀತಿ, 2020 ಹಾಗೂ ಇದರ ಜಾರಿಗಾಗಿ ದಿನಾಂಕ 01.12.2021 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2021ನ್ನು ಜಾರಿಗೊಳಿಸಿದೆ.<br><br>• ಸದರಿ ನಿಯಮಗಳಲ್ಲಿ ನದಿ ಹಾಗೂ ಉನ್ನತ ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ಮರಳು ಗಣಿಗಾರಿಕೆ ಸೇರಿದಂತೆ ಹೆಚ್ಚುವರಿಯಾಗಿ I, II ಮತ್ತು III ನೇ ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ಹಾಗೂ ಅಣೆಕಟ್ಟು / ಜಲಾಶಯ / ಬ್ಯಾರೇಜ್‌ಗಳು ಮತ್ತು ಸದರಿ ಹಿನ್ನೀರಿನ ಪ್ರದೇಶಗಳಲ್ಲಿ ಹೂಳಿನೊಂದಿಗೆ ದೊರೆತ ಮರಳನ್ನು ತೆಗೆದು ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗುತ್ತಿದೆ.<br><br>• ಸಾರ್ವಜನಿಕರಿಗೆ ನಿಗದಿತ ದರದಲ್ಲಿ ಮನೆ ಬಾಗಿಲಿಗೆ ಮರಳು ತಲುಪಿಸುವ ಸಂಬಂಧ ಮರಳನ್ನು ಪಡೆಯಲು ಆನ್ ಲೈನ್ ಬುಕಿಂಗ್ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ.<br><br>• I, II ಮತ್ತು III ನೇ ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ದೊರೆತ ಪ್ರತಿ ಮೆಟ್ರಿಕ್ ಟನ್ ಮರಳಿಗೆ ₹300/- ಗಳನ್ನು ನಿಗದಿಪಡಿಸಿ ಗ್ರಾಮ ಪಂಚಾಯಿತಿಯಿಂದ ವಿಲೇಪಡಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>• IV, V ಮತ್ತು ಉನ್ನತ ಶ್ರೇಣಿಯ ಹಳ್ಳ/ನದಿಗಳ ಪಾತ್ರಗಳಲ್ಲಿ ಹಾಗೂ ಅಣೆಕಟ್ಟು/ ಜಲಾಶಯ/ ಬ್ಯಾರೇಜ್‌ಗಳ ಪ್ರದೇಶಗಳಲ್ಲಿ ಹೂಳಿನೊಂದಿಗೆ ದೊರೆಯುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ₹ 700/- ಗಳನ್ನು ನಿಗದಿಪಡಿಸಲಾಗಿರುತ್ತದೆ.<br><br>• ಅದರಂತೆ, ಪ್ರಸ್ತುತ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 353 ಮರಳು ಬ್ಲಾಕ್ ಗಳನ್ನು ಗುರುತಿಸಿ, 300 ಮರಳು ಬ್ಲಾಕ್ ಗಳಿಗೆ ಆಯಾ ಜಿಲ್ಲಾ ಮರಳು ಸಮಿತಿಯಿಂದ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಈ ಪೈಕಿ 246 ಮರಳು ಬ್ಲಾಕ್ ಗಳಿಗೆ ಕಾರ್ಯಾದೇಶ ನೀಡಿದ್ದು, 76 ಮರಳು ಬ್ಲಾಕ್ ಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.<br><br>• ಮೆ॥ ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ ರವರಿಂದ ರಾಯಚೂರು ಹಾಗೂ ಹಾವೇರಿ ಜಿಲ್ಲೆಯಲ್ಲಿ ತಲಾ ಒಂದು ಮರಳು ಬ್ಲಾಕ್ ಗಳಲ್ಲಿ ಗಣಿಗಾರಿಕೆ ನಡೆಸಿ ಸ್ಟಾಕ್ ಯಾರ್ಡ್ ನಲ್ಲಿ ಮರಳು |

| | | |
|---|---|---|
| | | ಸಂಗ್ರಹಿಸಲಾಗುತ್ತಿದ್ದು, ಸದರಿ ಮರಳನ್ನು ಆನ್ ಲೈನ್ ಬುಕಿಂಗ್ ಮೂಲಕ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ನೀಡಲಾಗುವುದು.<br><br>• ದಕ್ಷಿಣ ಕನ್ನಡ ಜಿಲ್ಲೆಯ ಆದ್ಯಾಪಡಿ ಹಾಗೂ ಶಂಭೂರು ಕಿಂಡಿ ಅಣೆಕಟ್ಟು ಪ್ರದೇಶಗಳಲ್ಲಿ ಹೂಳಿನೊಂದಿಗೆ ದೊರೆಯುವ ಮರಳನ್ನು ಮೆ\|\| ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೊರೇಶನ್ ಲಿ., ವತಿಯಿಂದ ತೆಗೆದು ಸದರಿ ಮರಳನ್ನು ಆನ್ ಲೈನ್ ಬುಕಿಂಗ್ ಮೂಲಕ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ನೀಡಲಾಗುತ್ತಿದೆ. |
| | | • ರಾಜ್ಯದಲ್ಲಿ ಪಟ್ಟಾ ಜಮೀನಿನಲ್ಲಿ ಮರಳು ಗಣಿಗಾರಿಕೆಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ, ಪಟ್ಟಾ ಜಮೀನುಗಳಲ್ಲಿ ಮರಳು ಗಣಿಗಾರಿಕೆಗಾಗಿ 125 ಲೈಸನ್ಸ್ ಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>• ಕೇಂದ್ರ ಅಥವಾ ರಾಜ್ಯ ಸರ್ಕಾರಿ ಅಭಿವೃದ್ಧಿ ಕಾಮಗಾರಿಗಳಿಗೆ ಮರಳು ಬ್ಲಾಕ್ ಗಳನ್ನು ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>• ಕರಾವಳಿ ಜಿಲ್ಲೆಗಳ ಕರಾವಳಿ ನಿಯಂತ್ರಣ ವಲಯ ಹೊರತು ಪಡಿಸಿದ (Non-CRZ) ಉನ್ನತ ಶ್ರೇಣಿಯ ಹಳ್ಳ /ನದಿಗಳ ಪಾತ್ರಗಳಲ್ಲಿ ಲಭ್ಯವಿರುವ ಮರಳು ಬ್ಲಾಕ್ ಗಳಲ್ಲಿ ಆಯಾ ಜಿಲ್ಲೆಯ ಸಾಂಪ್ರದಾಯಿಕ ಮರಳು ತೆಗೆಯುವ ವ್ಯಕ್ತಿಗಳಿಗೆ ಟೆಂಡರ್ ಕಂ-ಹರಾಜು ಮೂಲಕ ಮರಳು ಬ್ಲಾಕ್ ಗಳನ್ನು ಹಂಚಿಕೆ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>• ಅದರಂತೆ, ಪ್ರಸ್ತುತ 23 ಮರಳು ಬ್ಲಾಕ್ ಗಳಿಗೆ ಜಿಲ್ಲೆಯ ಸಾಂಪ್ರದಾಯಿಕ ಮರಳು ತೆಗೆಯುವ ವ್ಯಕ್ತಿಗಳಿಗೆ ಟೆಂಡರ್ ಕಂ-ಹರಾಜು ಮೂಲಕ 5 ವರ್ಷಗಳ ಅವಧಿಗೆ ಗುತ್ತಿಗೆ ಮಂಜೂರು ಮಾಡಲಾಗಿರುತ್ತದೆ.<br>• ಮೇಲ್ಕಂಡಂತೆ, ರಾಜ್ಯದಲ್ಲಿ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಮರಳು ಪೂರೈಸಲು ಸರ್ಕಾರದಿಂದ ಕ್ರಮ ವಹಿಸಲಾಗಿರುತ್ತದೆ. |

| | | |
|---|---|---|
| ಇ) | ಮನೆ, ಶೌಚಾಲಯ ಸೇರಿದಂತೆ ಇತರೆ ನಿರ್ಮಾಣ ಕಾಮಗಾರಿಗಳಿಗೆ ಸ್ಥಳೀಯವಾಗಿ ದೊರೆಯುವ ಮರಳನ್ನು (ನದಿ, ಕೆರೆ, ತೊರೆ ಇತ್ಯಾದಿ ಮೂಲಗಳಿಂದ) ಸ್ಥಳೀಯರು ಪಡೆದುಕೊಳ್ಳಲು ಏನಾದರೂ ಕಾನೂನು ತೊಡಕುಗಳಿವೆಯೇ; ಇದ್ದಲ್ಲಿ ವಿವರ ನೀಡುವುದು; | ಹೊಸ ಮರಳು ನೀತಿ, 2020 ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2021 ರಲ್ಲಿ I, II, ಮತ್ತು III ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ಲಭ್ಯವಿರುವ ಮರಳನ್ನು ಗ್ರಾಮ ಪಂಚಾಯಿತಿ ಮೂಲಕ ವಿಲೇಪಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯಾ ತಾಲ್ಲೂಕಿನ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಸ್ಥಳೀಯ ಮನೆ ನಿರ್ಮಾಣ, ಸರ್ಕಾರದ ಅನುದಾನಿತ ಯೋಜನೆಯಡಿ ನಿರ್ಮಾಣವಾಗುವ ಮನೆ ಹಾಗೂ ಇತರ ಸಮುದಾಯ ನಿರ್ಮಾಣ ಕಾಮಗಾರಿಗಳಿಗೆ ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ಆದುದರಿಂದ, ಸ್ಥಳೀಯ ನಿರ್ಮಾಣ ಕಾಮಗಾರಿಗಳಿಗೆ ಸ್ಥಳೀಯರು ಮರಳು ಪಡೆದುಕೊಳ್ಳಲು ಯಾವುದೇ ಕಾನೂನು ತೊಡಕುಗಳಿರುವುದಿಲ್ಲ. |
| ಈ) | ಸ್ಥಳೀಯವಾಗಿ ಎತ್ತಿನ ಗಾಡಿ, ಟ್ರಾಕ್ಟರ್, ಇತ್ಯಾದಿ ಲಘು ವಾಹನಗಳ ಮೂಲಕ ಮರಳು ಸಾಗಾಣಿಕೆ ಮಾಡಲು ಸ್ಥಳೀಯವಾಗಿ ಅನುಮತಿ ಪಡೆಯಬೇಕೆ; ಹಾಗಿದ್ದಲ್ಲಿ ಯಾರಿಂದ ಅನುಮತಿ ಪಡೆಯ ಬೇಕು; ಅನುಮತಿ ಇಲ್ಲದೆ ಮರಳು ಸಾಗಾಣಿಕೆ- | ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2021 ರ ನಿಯಮ 31-T ರಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಎತ್ತಿನಗಾಡಿ, ಟ್ರಾಕ್ಟರ್, ಇತ್ಯಾದಿ ಲಘು ವಾಹನಗಳ ಮೂಲಕ ಮರಳು ಸಾಗಾಣಿಕೆ ಮಾಡುವವರು ಪ್ರತಿ ಮೆಟ್ರಿಕ್ ಟನ್ ಗೆ ನಿಗದಿತ ಶುಲ್ಕ ₹300/- ಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗೆ ಪಾವತಿಸಿ, ಮರಳು ಸಾಗಾಣಿಕೆ ಪರವಾನಿಗೆ ಪಡೆದು ಸಾಗಾಣಿಕೆ ಮಾಡಬೇಕಾಗಿರುತ್ತದೆ.<br>ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2021 ರ ನಿಯಮ 31-R ರಂತೆ ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯ ಸದಸ್ಯರುಗಳಿಗೆ ಅನಧಿಕೃತ |
| | -ಮಾಡುವವರ ವಿರುದ್ಧ ಕ್ರಮ ವಹಿಸುವವರು ಯಾರು; (ಸಂಪೂರ್ಣ ವಿವರ ಒದಗಿಸುವುದು) | ಮರಳು ಗಣಿಗಾರಿಕೆ / ಸಾಗಾಣಿಕೆದಾರರ ವಿರುದ್ಧ ಕ್ರಮ ಕೈಗೊಳ್ಳಲು ಅಧಿಕಾರ ಹೊಂದಿರುತ್ತಾರೆ. |

| | | |
|---|---|---|
| ಉ) | ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನದಿ, ಕೆರೆ, ತೊರೆ ಇತ್ಯಾದಿ ಮೂಲಗಳಿಂದ ಸಿಗುವ ಮರಳಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿಗಳ ಪಾತ್ರ ಮತ್ತು ಅಧಿಕಾರಗಳೇನು? (ವಿವರ ನೀಡುವುದು) | ಸರ್ಕಾರವು ಸ್ಥಳೀಯ ಕಾಮಗಾರಿಗಳಿಗೆ ಮರಳು ಪೂರೈಕೆ ಮಾಡುವ ಉದ್ದೇಶದಿಂದ ಹೊಸ ಮರಳು ನೀತಿ, 2020 ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2021 ರಲ್ಲಿ I, II, ಮತ್ತು III ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ಲಭ್ಯವಿರುವ ಮರಳನ್ನು ಗ್ರಾಮ ಪಂಚಾಯಿತಿ ಮೂಲಕ ಸ್ಥಳೀಯ ನಿರ್ಮಾಣ ಕಾಮಗಾರಿಗಳಿಗೆ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಅದರಂತೆ, I, II, ಮತ್ತು III ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ತಾಲ್ಲೂಕು ಮರಳು ಸಮಿತಿಯಿಂದ ಗುರುತಿಸಿದ ಮರಳು ಬ್ಲಾಕಗಳನ್ನು ಜಿಲ್ಲಾ ಮರಳು ಸಮಿತಿಯಿಂದ ಸದರಿ ಮರಳು ನಿಕ್ಷೇಪ ಪ್ರದೇಶಗಳಲ್ಲಿ ಮರಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳ ಮೂಲಕ ವಿಲೇವಾರಿ ಮಾಡಲು ಆಯಾ ಗ್ರಾಮ ಪಂಚಾಯಿತಿಗಳಿಗೆ ಅಧಿಸೂಚನೆ ಹೊರಡಿಸಿ ಕಾರ್ಯಾದೇಶ ನೀಡಲಾಗುವುದು.<br><br>ಕಾರ್ಯಾದೇಶ ನೀಡಿದ ಮರಳು ಬ್ಲಾಕ್ ಗಳಲ್ಲಿನ ಮರಳನ್ನು ಸ್ಥಳೀಯ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ನೀಡುವ ಸಂಬಂಧ, ಸಂಬಂಧಪಟ್ಟ ಗ್ರಾಮ ಪಂಚಾಯಿತಿಯನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ILMS ತಂತ್ರಾಂಶದಲ್ಲಿ ನೋಂದಾಯಿಸಲಾಗುವುದು.<br><br>ನಂತರ ಮರಳು ಪಡೆಯುವ ಯಾವುದೇ ಸ್ಥಳೀಯ ವ್ಯಕ್ತಿಗಳು ಸರ್ಕಾರವು ಪ್ರತಿ ಮೆಟ್ರಿಕ್ ಟನ್ ಮರಳಿಗೆ ನಿಗದಿಪಡಿಸಿರುವ ₹300/- ಗಳನ್ನು ಗ್ರಾಮ ಪಂಚಾಯಿತಿಗೆ ಪಾವತಿಸಿ ತನ್ನ ಸ್ವಂತ ಖರ್ಚಿನಲ್ಲಿ ಗ್ರಾಮ ಪಂಚಾಯಿತಿಯ ಪ್ರತಿನಿಧಿಯ ಸಮ್ಮುಖ ದಲ್ಲಿ ನಿಗದಿತ ಪ್ರದೇಶದಲ್ಲಿ ಮರಳನ್ನು ತುಂಬಿಕೊಂಡು ಹೋಗುವುದು.<br><br>ಗ್ರಾಮ ಪಂಚಾಯಿತಿ ವತಿಯಿಂದ ಮಾರಾಟ ಮಾಡುವ ಪ್ರತಿ ಟನ್ ಮರಳು ಮಾರಾಟದ ಮೊತ್ತದಲ್ಲಿ ನಿಯಮಾನುಸಾರದ ರಾಜಧನವನ್ನು ಸರ್ಕಾರಕ್ಕೆ ಹಾಗೂ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯ ವಂತಿಕೆಯನ್ನು ಜಿಲ್ಲಾ ಖನಿಜ ಪ್ರತಿಷ್ಠಾನಕ್ಕೆ ಪಾವತಿಸಿ, ಉಳಿಕೆ ಮೊತ್ತವನ್ನು ಸಂಬಂಧಿಸಿದ ಗ್ರಾಮ ಪಂಚಾಯಿತಿಗಳು ಮರಳಿನ ಸಂಬಂಧದ ನಿರ್ವಹಣಾ ವೆಚ್ಚಕ್ಕೆ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. |

ಸಂಖ್ಯೆ ಸಿಐ-ಎಂಎಂಎನ್/37/2023

Halappa Basappa

**(ಆಚಾರ್ ಹಾಲಪ್ಪ ಬಸಪ್ಪ)**

ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.